O.S.No. 56/2010 D W - 1

ದಿನಾಂಕ 17.01.2025 ರಂದು ಸಾಕ್ಷಿಯನ್ನು ಕರೆಯಿಸಿ, ಪ್ರಮಾಣ ವಚನ ಬೋಧಿಸಲಾಯಿತು.

ಪಾಟೀ ಸವಾಲು : ವಾದಿ ಪರ ವಕೀಲರಿಂದ :

ನಾನು ಬೆಂಗಳೂರು ಹಾಗೂ ಗೇರಹಳ್ಳಿಯಲ್ಲಿರುವ ನಮ್ಮ ತೋಟದ ಮನೆಯಲ್ಲಿ ಎರಡೂ ಕಡೆ ಇರುತ್ತೇನೆ. ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರವನ್ನು ನಮ್ಮ ವಕೀಲರ ಜೊತೆ ನಾನೇ ಬರೆಯಿಸಿದ್ದೇನೆ. ನಾನು ನನ್ನ ಬೆಂಗಳೂರಿನ ವಿಳಾಸವನ್ನು ನೀಡಿದ್ದೇನೆ. ನಾನು ಗೇರಹಳ್ಳಿಯಲ್ಲಿ ವಾಸವಾಗಿಲ್ಲ, ಬೆಂಗಳೂರಿನಲ್ಲಿ ವಾಸವಾಗಿದ್ದೇನೆ ಎಂದರೆ ಸರಿಯಲ್ಲ. ನಾನು ಗೇರಹಳ್ಳಿಯಲ್ಲಿ ವಾಸವಾಗಿರುವುದಕ್ಕೆ ನ್ಯಾಯಾಲಯದಲ್ಲಿ ದಾಖಲೆ ನೀಡಿದ್ದೇನೆ.

ವಾದಿಯವರು ದಾವಾ ಸ್ವತ್ತಿನಲ್ಲಿ ವಿಭಾಗ ಕೇಳಿ ದಾವೆ ಹಾಕಿರುತ್ತಾರೆ. ದಾವಾ ಸ್ವತ್ತು ಮೂಲತಃ ವಾದಿಯವರ ಅಣ್ಣನಿಗೆ ಸೇರಿದ್ದು. ದಾವಾ ಸ್ವತ್ತು ಮೂಲತಃ ವಾದಿಯವರ ತಾಯಿ 1 ನೇ ಪ್ರತಿವಾದಿಗೆ ಸೇರಿದ್ದು ಎಂದರೆ ಸರಿ. ದಾವಾ ಸ್ವತ್ತನ್ನು 1 ಮತ್ತು 4 ನೇ ಪ್ರತಿವಾದಿ ಹಾಗೂ ವಾದಿ ದಿನಾಂಕ 15.01.1997, 26.11.1998, 28.04.2001 ಮತ್ತು 29.05.2003 ರಲ್ಲಿ 1,43,000/- ನೀಡಿ ಖರೀದಿಸಿದ್ದರು ಎಂದರೆ ಸಾಕ್ಷಿ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಈಗಲೂ ಅವರೇ ದಾವಾ ಸ್ವತ್ತಿನ ಸ್ವಾಧೀನದಲ್ಲಿದ್ದಾರೆ ಎಂದರೆ ಸರಿಯಲ್ಲ. ದಾವಾ ಸ್ವತ್ತು ವಾದಿ ಮತ್ತು 1 ರಿಂದ 4 ನೇ ಪ್ರತಿವಾದಿಯವರ ಒಟ್ಟು ಕುಟುಂಬದ ಆಸ್ತಿ ಎಂದರೆ ಗೊತ್ತಿಲ್ಲ. ದಾವಾ ಸ್ವತ್ತಿಗೆ ವಾದಿ ಮತ್ತು 1 ರಿಂದ 4 ನೇ ಪ್ರತಿವಾದಿಯವರು ಮಾಲೀಕರು, ಅವರೇ ಅದರ ಸ್ವಾಧೀನದಲ್ಲಿದ್ದಾರೆ ಎಂದರೆ ಸರಿಯಲ್ಲ.

ದಾವಾ ಸ್ವತ್ತನ್ನು ಖರೀದಿಸಲು ಯಾರು ಯಾರು ಹಣ ಹೂಡಿಕೆ ಮಾಡಿದ್ದರು ಎಂದು ನನಗೆ ಗೊತ್ತಿಲ್ಲ. 2 ಮತ್ತು 3 ನೇ ಪ್ರತಿವಾದಿಯರು ದಾವಾ ಸ್ವತ್ತನ್ನು ಖರೀದಿಸಲು ಯಾವುದೇ ಹಣ ಹೂಡಿಕೆ ಮಾಡಿಲ್ಲ ಎಂದರೆ ಸಾಕ್ಷಿ ಗೊತ್ತಿಲ್ಲ ಎಂದು ನುಡಿಯುತ್ತಾರೆ. ದಾವಾ ಸ್ವತ್ತಿನ ಖಾತೆ 1 ನೇ ಪ್ರತಿವಾದಿಯ ಹೆಸರಿನಲ್ಲಿ ಬರುತ್ತಿತ್ತು ಎಂದರೆ ಸಾಕ್ಷಿ ಗೊತ್ತಿಲ್ಲ ಎಂದು ನುಡಿಯುತ್ತಾರೆ. ವಾದಿ , 1 ಮತ್ತು 4 ನೇ ಪ್ರತಿವಾದಿ

ಯರು , ದಾವಾ ಸ್ವತ್ತಿನ ಖರೀದಿಯ ನಂತರ ಅದರ ಜಂಟಿ ಸ್ವಾಧೀನದಲ್ಲಿ ಇದ್ದರೆಂದರೆ ಗೊತ್ತಿಲ್ಲ. ವಾದಿ ಯವರಿಗೂ ಸಹ ದಾವಾ ಸ್ವತ್ತಿನಲ್ಲಿ ಮೂರನೇ ಒಂದು ಭಾಗ ಹಕ್ಕಿದೆ ಎಂದರೆ ಸಾಕ್ಷಿ ಆ ಬಗ್ಗೆ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ.

ಮುಂದುವರೆದ ಪಾಟೀ ಸವಾಲಿಗೆ ಸಮಯಾವಕಾಶ ಕೋರಿದ್ದರಿಂದ ಪಾಟೀ ಸವಾಲಿಗೆ ಸಮಯಾವಕಾಶ ನೀಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನವನ್ನು ಗಣಕೀಕರಣ ಮಾಡಲಾಯಿತು)

ಓ ಹೇ ಕೇ ಸ ಒ

ಎರಡನೇ ಅಪರ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಕನಕಪುರ